# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

## ಟಿ. ನರಸೀಪುರ.

## ಸಿ. ಸಿ ನಂ.2248/2025

ಪಿರ್ಯಾದಿದಾರರು : ಸರ್ಕಾರ ಪರವಾಗಿ ಬನ್ನೂರು ಪೊಲೀಸ್ ಠಾಣೆ

ವಿರುದ್ಧ

ಆರೋಪಿ : ಕುಮಾರ್ ಬಿನ್ ನಿಂಗೇಗೌಡ, 45 ವರ್ಷ,
ವಾಸಃ ಬೀಡನಹಳ್ಳಿ ಗ್ರಾಮ, ಬನ್ನೂರು
ಹೋಬಳಿ, ಟಿ.ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

## ದೋಷಾರೋಪಣೆ

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ದೋಷಾರೋಪಣೆಯನ್ನು ಮಾಡುತ್ತೇನೆ.**

ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಏನೆಂದರೆ

ದಿನಾಂಕ 15.05.2024 ರಂದು ರಾತ್ರಿ 8.30 ಗಂಟೆ ಸಮಯದಲ್ಲಿ ತಿ.ನರಸೀಪುರ ತಾಲ್ಲೂಕು ಬನ್ನೂರು ಪೊಲೀಸ್ ಠಾಣೆ ಸರಹದ್ದು ಬೀಡನಹಳ್ಳಿ ಗ್ರಾಮದ ಬಸವೇಶ್ವರ ದೇವಸ್ಥಾನದ ಹತ್ತಿರ ಚಾಸಾ-1 ರಾಜೇಶ್‌ರವರು ಕುಳುತುಕೊಂಡಿದ್ದಾಗ ಆರೋಪಿಯಾದ ನೀವು ಅವರ ಜೊತೆ ಆಸ್ತಿಯ ವಿಚಾರವಾಗಿ ಜಗಳ ತೆಗೆದು ಕುಡುಗೋಲಿನ ಮರದ ಹಿಡಿಯಿಂದ ಚಾಸಾ-1 ರವರ ಮುಖಕ್ಕೆ ಗುದ್ದಿದ್ದರಿಂದ ಅವರ ಮೂಗಿನ ತುದಿ, ತುಟಿಗೆ ಪೆಟ್ಟಾಗಿ ಬಾಯಿಯ ಮೇಲ್ಭಾಗದ ನಾಲು ಹಲ್ಲುಗಳು ಮುರಿದು ಹೋಗಿದ್ದು ಮತ್ತು ಅದೇ ಕುಡುಗೋಲಿನಿಂದ ಚಾಸಾ-1 ರವರ ಎಡ ಭಾಗದ ಕಾಲಿಗೆ ಹೊಡೆದು ಗಾಯ ಪಡಿಸಿ ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ.326 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ, ಆರೋಪಿಯಾದ ನೀವು ಚಾಸಾ–1 ಕೊಲೆ ಮಾಡುವುದಾಗಿ ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.506 ರನ್ವಯ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಮೇಲೆ ಹೇಳಿದ ಅಪರಾಧಗಳಿಗಾಗಿ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

ದಿನಾಂಕಃ 01.04.2026.

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.**
**ಟಿ. ನರಸೀಪುರ.**

## **ಆರೋಪಿತರ ಹೇಳಿಕೆ**

ಪ್ರಶ್ನೆ- 1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿತರಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ. ಎಫ್.ಸಿ., ಟಿ.ನರಸೀಪುರ.**

**ಆರೋಪಿ ಸಹಿ**